ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ

ಸಿ.ಸಿ. ನಂ. **567/2019**

ಸಾಕ್ಷಿಗೆ ದಿನಾಂಕಃ **4.7.2022** ರಂದು ಪ್ರಮಾಣವಚನ ಬೋಧಿಸಲಾಯಿತು.

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರವಿಕುಮಾರ್ | ಪಿ.ಡಬ್ಲ್ಯೂ-4 |
| ತಂದೆಯ/ಗಂಡನ ಹೆಸರು | : | ಸಿದ್ದಾಚಾರಿ | ಸಿ.ಡಬ್ಲ್ಯೂ-4 |
| ವಯಸ್ಸು | : | 44 | |
| ಉದ್ಯೋಗ | : | ವ್ಯವಸಾಯ | |
| ವಾಸಸ್ಥಳ | : | ದೆಗ್ಗಲಹುಂಡಿ | |

ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿ ಶವ ಹೂತಿರುವ ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದು ಈಗಾಗಲೇ ನಿಪಿ3 ಎಂದು ಗುರುತಾಗಿದ್ದು ಸಾಕ್ಷಿ ಸಹಿಯನ್ನು ನಿಪಿ2 ಬಿ ಎಂದು ಗುರುತಿಸಲಾಯಿತು. ನಿಪಿ3 ಕ್ಕೆ ನಾನು ಸುಮಾರು 4 ವರ್ಷದ ಹಿಂದೆ ಚಾಸ1 ರವರು ತನ್ನ ಮಗನನ್ನು ಹೂತಿದ್ದ ಜಮೀನು ಬಳಿ ಪೋಲಿಸರು ಮಹಜರು ನಡೆಸಿದ ಸಮಯದಲ್ಲಿ ಸಹಿ ಮಾಡಿರುತ್ತೇನೆ. ನನ್ನನ್ನು ಹೊರತುಪಡಿಸಿ ಅದಕ್ಕೆ ಚಾಸ5 ರವರ ಸಹ ಸಹಿ ಮಾಡಿರುತ್ತಾರೆ.

ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ

ಪಂಚರಾಗಿ ಬರಲು ಪೋಲಿಸರು ನನಗೆ ಯಾವುದೇ ನೋಟಿಸ್ ನೀಡಿರುವುದಿಲ್ಲ. ನನಗೆ ಕನ್ನಡ ಓದಲು ಮತ್ತು ಬರೆಯಲು ಬರುತ್ತದೆ. ನಿಪಿ2 ನ್ನು ನಾನು ಓದಿರುವುದಿಲ್ಲ, ಹಾಗೆ ಸಹಿ ಮಾಡಿರುತ್ತೇನೆ. ನಿಪಿ3 ಜರುಗಿಸಿದ ಜಮೀನು ಸರ್ವೆ ನಂ. ನನಗೆ ಗೊತ್ತಿರುವುದಿಲ್ಲ. ನಿಪಿ3 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪೋಲಿಸರ ಶವದ ಸಮಾಧಿ ಬಳಿ ಬಂದಿರುತ್ತಾರೆ, ಆಗ ನಾನು ನಿಪಿ3 ಕ್ಕೆ ಸಹಿ ಮಾಡಿರುತ್ತೇನೆ. ಯಾರ್ಯಾರು ಘಟನಾ ಸ್ಥಳಕ್ಕೆ ಬಂದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಮತ್ತು ಚಾಸ1 ರವರು ಜೊತೆಯಲ್ಲಿ ಕೆಲಸ ಮಾಡುತ್ತಿದ್ದೆವು, ಆಗ ಅವರ ಪರಿಚಯ ನನಗೆ ಇರುತ್ತದೆ. ಚಾಸ1 ನನ್ನ ಸ್ನೇಹಿತನಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ